ಅಸಲು ದಾವೆ ನಂ. 122/2015
ಪಿ.ಡಬ್ಲ್ಯು ಃ 01

ಸಾಕ್ಷಿಯನ್ನು ಸತ್ಯ ಪ್ರತಿಜ್ಞೆಯ ಮೇರೆಗೆ ದಿನಾಂಕಃ 20.10.2018 ರಂದು ಪ್ರಮಾಣಿಕರಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಃ ಶ್ರೀ. ಬಿಡಿಎಸ್ ವಾದಿ ಪರ ವಕೀಲರಿಂದಃ

ನಾನು ಈ ದಾವೆಯಲ್ಲಿ ವಾದಿಯಿರುತ್ತೇನೆ. ನಾನು ಈ ದಿನ ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮುಖಾಂತರ ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ಸಂಗತಿಗಳು ನನಗೆ ತಿಳಿದ ಮಾಹಿತಿಯಂತೆ ಸತ್ಯವಾಗಿರುತ್ತದೆ. ಪ್ರಮಾಣ ಪತ್ರವನ್ನು ನನಗೆ ಓದಿ ಹೇಳಲಾಗಿದ್ದು ಅದನ್ನು ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ನಾನು ಹಾಜರು ಪಡಿಸಿದ ದಾಖಲೆಗಳನ್ನು ಈ ಕೆಳಗಿನಂತೆ ಗುರುತಿಸಲಾಯಿತು.

2 ಕೈ ಬರಹಗಳ ಪಹಣಿಯ ಧೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅವುಗಳನ್ನು ನಿ.ಪಿ. 5 ಮತ್ತು ನಿ.ಪಿ. 6 ಎಂದು ಗುರುತಿಸಲಾಯಿತು. ಮುಟೇಶನ್ ರಿಜಿಸ್ಟರ್‌ನ ಧೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ. 7 ಎಂದು ಗುರುತಿಸಲಾಯಿತು. ಕ್ರಯಪತ್ರದ ಧೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ. 8 ಎಂದು ಗುರುತಿಸಲಾಯಿತು. ಋಣಭಾರದ ರಹಿತ ಪ್ರಮಾಣ ಪತ್ರದ ಧೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ. 9 ಎಂದು ಗುರುತಿಸಲಾಯಿತು. ಗ್ರಾಂಟ್ ಸರ್ಟಿಫೀಕೇಟ್‌ನ ಧೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ. 10 ಎಂದು ಗುರುತಿಸಲಾಯಿತು. ದಾನ ಪತ್ರದ ಧೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ. 11 ಎಂದು ಗುರುತಿಸಲಾಯಿತು.

ಪಾಟೀಸವಾಲು ಃ ಕಾಲಾವಕಾಶ ಕೋರಿದ್ದು, ನೀಡಿ ಮುಂದೂಡಲಾಯಿತು.

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.

ಓ ಹೆ ಕೇ

ಜೆ.ಎಂ.ಎಫ್.ಸಿ.